# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ದಿನಾಂಕಃ 26–04–2016ರಂದು ನಡೆದ ಸಭೆಯ ನಡವಳಿಗಳು

| ಹಾಜರಿದ್ದ ಸದಸ್ಯರುಗಳು | | ಹಾಜರಿದ್ದ ಅಧಿಕಾರಿಗಳು |
|---|---|---|
| ಶ್ರೀಯುತರುಗಳಾದ : | | |
| ಎಮ್. ಶಿವರಾಜು | – ಅಧ್ಯಕ್ಷರು | ಕೌನ್ಸಿಲ್ ಕಾರ್ಯದರ್ಶಿ, |
| ವಿ.ವಿ.ಪಾರ್ತಿಬರಾಜನ್ | – ಸದಸ್ಯರು | ವಿಶೇಷ ಆಯುಕ್ತರು (ಕಲ್ಯಾಣ), |
| ಆರ್.ಪದ್ಮಾವತಿ ಅಮರ್‌ನಾಥ್ | – ಸದಸ್ಯರು | ಮುಖ್ಯ ಲೆಕ್ಕಾಧಿಕಾರಿ, ಮುಖ್ಯ ಆರ್ಥಿಕ ಅಧಿಕಾರಿ, |
| ಲಲಿತ ತಿಮ್ಮನಂಜಯ್ಯ.ಕೆ.ಎಲ್.ಆರ್ | – ಸದಸ್ಯರು | ಆರೋಗ್ಯಾಧಿಕಾರಿ (ದಕ್ಷಿಣ), |
| ನೇತ್ರಾ ನಾರಾಯಣ್ | – ಸದಸ್ಯರು | ಕಾರ್ಯಪಾಲಕ ಅಭಿಯಂತರರು (ಸಾರಿಗೆ), |
| ಉಮೇಸಲ್ಮ | – ಸದಸ್ಯರು | ಸಹಾಯಕ ಕಾರ್ಯಪಾಲಕ ಅಭಿಯಂತರರು (ಸಾರಿಗೆ), (ನಾಗಪುರ), (ಪೂರ್ವ), |
| ಎ. ಕೋದಂಡರೆಡ್ಡಿ | – ಸದಸ್ಯರು | ಉಪ ಅರಣ್ಯ ಸಂರಕ್ಷಣಾಧಿಕಾರಿ |
| ಕೆ. ಪೂರ್ಣಿಮ | – ಸದಸ್ಯರು | ಸಂಬಂಧಪಟ್ಟ ಅಧಿಕಾರಿಗಳು. |
| ಕುಸುಮ. ಹೆಚ್ | – ಸದಸ್ಯರು | --- |
| ಕೆ.ವಿ. ರಾಜೇಂದ್ರಕುಮಾರ್ | – ಸದಸ್ಯರು | --- |
| ಅರುಣ ರವಿ | – ಸದಸ್ಯರು | --- |

***(ಹಿಂದಿನ ಸಭೆಯ ನಡವಳಿಗಳನ್ನು ಓದಿ ದಾಖಲು ಮಾಡಿಕೊಳ್ಳಲಾಯಿತು)***

### ***01]. ವಿಷಯದ ಸಂಖ್ಯೆಃ ತೆಆಸ್ಥಾಸ/07/2016–17***

ಆಯುಕ್ತರ ದಿನಾಂಕ: 21.04.20146ರ ಟಿಪ್ಪಣಿಯಲ್ಲಿ ಪ್ರಸ್ತಾಪಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 2016–17 ನೇ ಸಾಲಿಗೆ ಸಂಬಂಧಪಟ್ಟಂತೆ ಆರ್ಥಿಕ ವರ್ಷದ ಪೂರ್ಣ ಆಸ್ತಿ ತೆರಿಗೆಯನ್ನು ದಿನಾಂಕ : 30–04–2016 ರ ಒಳಗೆ ಪಾವತಿಸಿದ್ದಲ್ಲಿ ಶೇಕಡ 5 ರಷ್ಟು ರಿಯಾಯಿತಿಯನ್ನು ನೀಡಲು ಕೆ.ಎಂ.ಸಿ ಕಾಯ್ದೆ 1976 ರ ನಿಯಮ 108ಎ ಅನ್ವಯ ಅವಕಾಶ ಕಲ್ಪಿಸಲಾಗಿದೆ. ರಿಯಾಯಿತಿ ಅವಧಿಯನ್ನು ವಿಸ್ತರಿಸುವ ಬಗ್ಗೆ ಪಾಲಿಕೆ ಸಭೆ ಹಾಗೂ ಸರ್ಕಾರದ ಅನುಮೋದನೆ ಪಡೆಯಲು ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.

ಮುಂದುವರೆದಂತೆ 2016–17 ನೇ ಸಾಲಿನ ಆಸ್ತಿತೆರಿಗೆಯನ್ನು ಏಪ್ರಿಲ್ ಮಾಹೆಯಿಂದ ಪ್ರಾರಂಭಗೊಂಡಿದ್ದು, ಪ್ರಸ್ತುತ ಸಾಲಿನಲ್ಲಿ ಪ್ರದೇಶವಾರು ಯೂನಿಟ್ ದರ ಹಾಗೂ ವಲಯ ವರ್ಗೀಕರಣವನ್ನು ಪರಿಷ್ಕರಿಸಲಾಗಿದ್ದು, ತೆರಿಗೆದಾರರು ಘೋಷಣೆಗಳನ್ನು ಆನ್‌ಲೈನ್ ಮುಖಾಂತರ ಗಣಕಯಂತ್ರದಲ್ಲಿಯೇ ಸಿದ್ದಪಡಿಸಿ, ಆನ್‌ಲೈನ್ ಅಥವಾ ಕೆನರಾ ಬ್ಯಾಂಕ್ ಶಾಖೆಗಳಲ್ಲಿ ಪಾವತಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಪ್ರಸ್ತುತ ಪದ್ಧತಿಯ ಬಗ್ಗೆ ಸಾರ್ವಜನಿಕರು / ತೆರಿಗೆದಾರರು ಅರ್ಥೈಸಿಕೊಂಡು ಕ್ಲುಪ್ತ ಅವಧಿಯಲ್ಲಿ ಆಸ್ತಿತೆರಿಗೆ ಪಾವತಿಸುವುದು ಕಷ್ಟಕರವಾಗಿರುವುದಾಗಿ ತಿಳಿದು ಬಂದಿರುತ್ತದೆ. ಅಲ್ಲದೆ ಏಪ್ರಿಲ್ ಮಾಹೆಯಲ್ಲಿ ಸುಮಾರು ಸಾರ್ವತ್ರಿಕ ರಜೆ ದಿನಗಳು ಇದ್ದುದರಿಂದ ಆಸ್ತಿತೆರಿಗೆಯನ್ನು ನಿಗಧಿತ ಅವಧಿಯೊಳಗಾಗಿ ಪಾವತಿಸಲು ಸಾಧ್ಯವಾಗಿರುವುದಿಲ್ಲವೆಂದು ತಿಳಿಸುತ್ತಾ, ರಿಯಾಯಿತಿ ಅವಧಿಯನ್ನು ವಿಸ್ತರಿಸುವುದು ಅವಶ್ಯಕವಾಗಿರುತ್ತದೆ. ಕಳೆದ ಸಾಲಿನಲ್ಲಿಯೂ ಸಹ ಪಾಲಿಕೆ ಸಭೆಯಲ್ಲಿ ನಿರ್ಣಯ ಕೈಗೊಂಡು ಸರ್ಕಾರದ ಅನುಮೋದನೆಯನ್ನು ಸಹ ಪಡೆಯಲಾಗಿರುತ್ತದೆ.

ಮೇಲಿನ ಹಿನ್ನಲೆಯಲ್ಲಿ ತೆರಿಗೆದಾರರ ಅನುಕೂಲಕ್ಕಾಗಿ 2016–17ನೇ ಸಾಲಿನ ಆಸ್ತಿ ತೆರಿಗೆಯನ್ನು ಪೂರ್ಣವಾಗಿ ಪಾವತಿಸುವವರಿಗೆ ಶೇಕಡ 5 ರಷ್ಟು ರಿಯಾಯಿತಿ ನೀಡುವ ಅವಧಿಯನ್ನು ಇನ್ನೂ 30 ದಿನಗಳಿಗೆ ವಿಸ್ತರಿಸಿ ದಿನಾಂಕ ಃ 30–05–2016 ರ ಒಳಗೆ ಪಾವತಿಸುವ ಎಲ್ಲಾ ಆಸ್ತಿ ತೆರಿಗೆದಾರರಿಗೆ ಶೇಕಡ 5 ರಷ್ಟು ರಿಯಾಯಿತಿ ನೀಡುವ ಬಗ್ಗೆ ಸೂಕ್ತ ನಿರ್ಣಯ ಕೈಗೊಳ್ಳುವಲ್ಲಿ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಮುಂದೆ ಮಂಡಿಸಲಾದ ಟಿಪ್ಪಣಿ.

ನಿರ್ಣಯ: ಆಯುಕ್ತರ ದಿನಾಂಕ: 21.04.2016ರ ಟಿಪ್ಪಣಿಯನ್ನು ಒಪ್ಪುತ್ತಾ, ಆಸ್ತಿ ತೆರಿಗೆಯ ವಾರ್ಷಿಕ ಮೊತ್ತವನ್ನು ಪೂರ್ಣವಾಗಿ ಪಾವತಿಸುವ ಮೊತ್ತಕ್ಕೆ ನೀಡುವ ಶೇಕಡ 5% ರಷ್ಟು ರಿಯಾಯಿತಿಯ ಅವಧಿಯು ದಿನಾಂಕ: 30.04.2016ಕ್ಕೆ ಮುಕ್ತಾಯವಾಗಲಿದ್ದು, ಆಸ್ತಿ ತೆರಿಗೆ ಪಾವತಿದಾರರ ಹಿತದೃಷ್ಟಿಯಿಂದ ಇನ್ನೂ ಒಂದು ತಿಂಗಳು ಅಂದರೆ, ದಿನಾಂಕ: 01.05.2016 ರಿಂದ 30.05.2016ರ ವರೆವಿಗೆ ಒಟ್ಟು 30 ದಿನಗಳಿಗೆ ಶೇಕಡ 5%ರಷ್ಟು ರಿಯಾಯಿತಿ ನೀಡುವುದನ್ನು ವಿಸ್ತರಿಸಲು ಒಪ್ಪುವುದೆಂದು ಸಮಿತಿಯು ತೀರ್ಮಾನಿಸಿತು.

(ಎಮ್. ಶಿವರಾಜು)
ಅಧ್ಯಕ್ಷರು
ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ